ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಈ) ಹಾಗಿದ್ದಲ್ಲಿ, ಎಂದಿನಿಂದ ಜಿಂಕೆ ವನವನ್ನು ತೆರೆಯಲಾಗುವುದು?

152 ಶ್ರೀ ಕರಡಿ ಸಂಗಣ್ಣ ಅಮರಪ್ಪ
ಮಾನ್ಯ ಲೋಕೋಪಯೋಗಿ ಸಚಿವರು

ಅ) ಕೊಪ್ಪಳ ನಗರಕ್ಕೆ ಬೈಪಾಸ್ ರಸ್ತೆಯನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಕೇಂದ್ರ ಸರ್ಕಾರದ ಮುಂದಿದೆ.

ಆ) ಹಾಗಿದ್ದಲ್ಲಿ, ಯಾವಾಗ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು;

ಕೇಂದ್ರ ಸರ್ಕಾರದ ಭೂ ಸಾರಿಗೆ ಮಂತ್ರಾಲಯದಿಂದ ಟಿ.ಓ.ಆರ್ ಅನುಮೋದನೆಗೊಂಡಿದ್ದು, ಅಲೈನ್‌ಮೆಂಟ್‌ಗಾಗಿ ಸಮಾಲೋಚಕರನ್ನು ನೇಮಿಸಲು ಟೆಂಡರ್ ಪ್ರಕ್ರಿಯೆ ಪ್ರಗತಿಯಲ್ಲಿದೆ.

ಇ) ಈ ಕಾಮಗಾರಿಗೆ ನಿಗದಿಪಡಿಸಿರುವ ಅನುದಾನದ ಮೊತ್ತವೆಷ್ಟು;

ಅಲೈನ್‌ಮೆಂಟ್ ಅನುಮೋದನೆಗೊಂಡ ನಂತರ ಅಂದಾಜು ಮೊತ್ತ ನಿಗದಿಪಡಿಸಲಾಗುವುದು.

ಈ) ಕೊಪ್ಪಳ ತಾಲ್ಲೂಕಿನಲ್ಲಿ ಭಾರಿ ಮತ್ತು ಮಧ್ಯಮ ಕೈಗಾರಿಕೆಗಳು ಹೇರಳವಾಗಿರುವುದರಿಂದ ಅತೀ ಹೆಚ್ಚು ಸರಕು ಸಾಗಾಣಿಕೆ ವಾಹನಗಳಿಂದ ರಸ್ತೆಗಳು ಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಗುಂಡಿಗಳನ್ನು ಮುಚ್ಚುವ ಕಾಮಗಾರಿಯನ್ನು ಕೈಗೊಂಡು ಈ ರಸ್ತೆಗಳನ್ನು ಸುಸ್ಥಿತಿಯಲ್ಲಿಡಲು ಕ್ರಮ ಕೈಗೊಳ್ಳಲಾಗಿದೆ.

2008–09ನೇ ಸಾಲಿನ ಲೆಕ್ಕಶೀರ್ಷಿಕೆ 5054 ಯೋಜನೆ ಇತರೆ ರಸ್ತೆ ನಿರ್ಮಾಣ, ಕೇಂದ್ರ ರಸ್ತೆ ನಿಧಿ ಹಾಗೂ ವಿಶೇಷ ಅನುದಾನದ ಅಡಿಯಲ್ಲಿ ಕಲ್ಮಶಾ–ಶಿಗ್ಗಾಂವ ರಾಜ್ಯ ಹೆದ್ದಾರಿ ಹಾಗೂ ಚಿಕ್ಕಹಸರೂರು–ಮುದಗಲ್–ಮುಂಡರಗಿ ರಾಜ್ಯ ಹೆದ್ದಾರಿ ಭಾಗವಾದ ಹಲಗೇರಾ–ಕೇಸ್ಲಾಪೂರ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಗುತ್ತಿಗೆದಾರರನ್ನು ನೇಮಿಸುವ ಪ್ರಕ್ರಿಯೆ ಜಾರಿಯಲ್ಲಿದೆ.

ಉ) ಹಾಗಿದ್ದಲ್ಲಿ, ಈ ರಸ್ತೆಗಳನ್ನು ದುರಸ್ತಿಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

159 ಶ್ರೀ ಪ್ರತಾಪಗೌಡ ಪಾಟೀಲ್(ಮಸ್ಕಿ)
ಮಾನ್ಯ ಲೋಕೋಪಯೋಗಿ ಸಚಿವರು